ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
ಆರನೇ ಅಧಿವೇಶನ
(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 30ನೇ ಮಾರ್ಚ್, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

------

1. ವಿತ್ತೀಯ ಕಾರ್ಯಕಲಾಪಗಳು

2015-16ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ನಡೆದ ಸಾಮಾನ್ಯ ಚರ್ಚೆಗೆ ಸರ್ಕಾರದ ಉತ್ತರ.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೇ ಪಟ್ಟಿ

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಹಾಗೂ ನಾಲ್ಕನೇ ಪಟ್ಟಿಗಳ ರೀತ್ಯಾ)

4. ವರದಿಗಳನ್ನೊಪ್ಪಿಸುವುದು

1. ಶ್ರೀ ಕೆ.ಬಿ.ಕೋಳಿವಾಡ್, (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ) ಅವರು ಹದಿನಾಲ್ಕನೇ ವಿಧಾನಸಭೆಯ ಹಕ್ಕುಬಾಧ್ಯತಾ ಸಮಿತಿಯ ನಾಲ್ಕನೇ ಹಾಗೂ ಐದನೇ ವರದಿಗಳನ್ನೊಪ್ಪಿಸುವುದು.

2 ಶ್ರೀ ತನ್ವೀರ್ ಸೇಠ್ (ಅಧ್ಯಕ್ಷರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು ಹದಿನಾಲ್ಕನೇ ವಿಧಾನಸಭೆಯ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಎರಡನೇ ವರದಿಯನ್ನು ಒಪ್ಪಿಸುವುದು.

3 ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಅಧ್ಯಕ್ಷರು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ) ಅವರು ಹದಿನಾಲ್ಕನೇ ವಿಧಾನಸಭೆಯ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಮೂರನೇ ವರದಿಯನ್ನು ಒಪ್ಪಿಸುವುದು.

ಮು.ತಿ.ನೋ.,.

5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(i) ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) ವಿಧೇಯಕ, 2015
ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು

ಅ) 2015ನೇ ಸಾಲಿನ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(ii) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2015
ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು

ಅ) 2015ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ)(ತಿದ್ದುಪಡಿ)ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(iii) ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯಲು ಮಕ್ಕಳ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕ, 2015
ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು

ಅ) 2015ನೇ ಸಾಲಿನ ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯಲು ಮಕ್ಕಳ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(iv) ಕನ್ನಡ ಭಾಷಾ ಕಲಿಕೆ ವಿಧೇಯಕ, 2015
ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು

ಅ) 2015ನೇ ಸಾಲಿನ ಕನ್ನಡ ಭಾಷಾ ಕಲಿಕೆ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಮು.ತಿ.ನೋ,.

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಗೋವಿಂದ ಎಂ. ಕಾರಜೋಳ ಅವರು ಗ್ರಾಮಪಂಚಾಯತಿಗಳಲ್ಲಿ ಪೂರ್ವಾನುಮೋದನೆಯಿಲ್ಲದೆ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯ ಸೇವೆಯನ್ನು ಅನುಮೋದನೆಗೆ ಒಳಪಡಿಸುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

2. ಶ್ರೀ ಹೆಚ್.ಆರ್.ಅಲಗೂರು(ರಾಜು) ಅವರು ವಿಜಯಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ವಿಫಲವಾದ ಕೊಳವೆ ಬಾವಿಗಳಿಗೆ ಹಣ ಬಿಡುಗಡೆಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

3. ಶ್ರೀ ಶಾರದಾ ಪೂರ್‍ಯ ನಾಯ್ಕ್ ಅವರು ಶಿವಮೊಗ್ಗ ತಾಲ್ಲೂಕು ಹೊಳಲೂರು ಹೋಬಳಿ ಬೆಳಲಕಟ್ಟೆ ಗ್ರಾಮದ ಸರ್ವೆ ನಂಬರ 151ರಲ್ಲಿ 200ಎಕರೆ ಗೋಮಾಳ ಜಮೀನನ್ನು ರೈತರು ಸಾಗುವಳಿ ಮಾಡುತ್ತಿದ್ದು ಆ ಜಮೀನನ್ನು ಸಿ.ಆರ್.ಪಿ. ಎಫ್ ಬೆಟಾಲಿಯನ್ ಸ್ಥಾಪಿಸಲು ಮಂಜೂರಾತಿ ನೀಡಿರುವುದರಿಂದ ಸಾಗುವಳಿದಾರರಿಗೆ ಹಿಡುವಳಿ ಚೀಟಿ ನೀಡದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಹೆಚ್.ಎಸ್. ಶಿವಶಂಕರ ಅವರು ದಾವಣಗೆರೆ ಜಿಲ್ಲೆ ಹರಿಹರ ನಗರದಲ್ಲಿ ನಿರ್ಮಿಸುತ್ತಿರುವ ಈಜು ಕೊಳ ಕಾಮಗಾರಿಯು ಅನುದಾನದ ಕೊರತೆಯಿಂದ ಸ್ಥಗಿತಗೊಂಡಿದ್ದು ಕೂಡಲೇ ಅನುದಾನವನ್ನು ಬಿಡುಗಡೆ ಮಾಡುವ ಹಾಗೂ ತಾಲ್ಲೂಕು ಮತ್ತು ಜಿಲ್ಲಾ ಕ್ರೀಡಾಂಗಣ ಸಮಿತಿಯನ್ನು ಪುನರ್ ರಚಿಸುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ರಾಮನಗರ ತಾಲ್ಲೂಕು ಕೂಟಗಲ್ ಹೋಬಳಿ, ಜಾಲಮಂಗಲ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗಿದ್ದರೂ ಕಾಮಗಾರಿ ಪೂರ್ಣಗೊಳ್ಳದಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

6. ಶ್ರೀ ಜೆ.ಆರ್.ಲೋಬೋ ಅವರು ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಪುಣಚ ಗ್ರಾಮದಲ್ಲಿ ಶ್ರೀಮತಿ ಸರೋಜಿನಿಯವರ ಸ್ವಾಧೀನದ ಕಟ್ಟಡದಲ್ಲಿ ಎಂ.ಎಸ್.ಐ.ಎಲ್ ಸಂಸ್ಥೆಯು ಮದ್ಯದಂಗಡಿಯನ್ನು ನಡೆಸಲು ನೀಡಿರುವ ಅನುಮತಿಯನ್ನು ರದ್ದುಪಡಿಸುವ ಬಗ್ಗೆ ಮಾನ್ಯ ಅಬಕಾರಿ ಸಚಿವರ ಗಮನ ಸೆಳೆಯುವುದು.

7. ಶ್ರೀಮತಿ ಶಾರದಾ ಮೋಹನ ಶೆಟ್ಟಿ ಅವರು ಕುಮಟಾ-ಹೊನ್ನಾವರ ವಿಧಾನಸಭಾ ಕ್ಷೇತ್ರಕ್ಕೆ ಕನಿಷ್ಠ 25 ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

8. ಶ್ರೀ ಸಿ.ಟಿ. ರವಿ ಅವರು ಚಿಕ್ಕಮಗಳೂರು ಜಿಲ್ಲಾ ವ್ಯಾಪ್ತಿಯ ಆಹಾರ ಇಲಾಖೆಯ ಅಧಿಕಾರಿಗಳು 2014ರ ಸಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಯಲ್ಲಿ ಎಪಿಎಲ್ ಕಾರ್ಡುದಾರರ ಪಡಿತರ ವಿತರಣೆಯಲ್ಲಿ ಅವ್ಯವಹಾರ ನಡೆಸಿದ್ದರೂ ಯಾವುದೇ ಕ್ರಮ ಕೈಗೊಳ್ಳದಿರುವ ಬಗ್ಗೆ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

9. ಶ್ರೀ ಸಂಜಯ ಬಿ.ಪಾಟೀಲ್ ಅವರು ಗೃಹ ಇಲಾಖೆಯಿಂದ ಸಬ್ ಇನ್‌ಸ್ಪೆಕ್ಟರ್ ಹುದ್ದೆಯಲ್ಲಿ 12ವರ್ಷಗಳ ಸೇವೆ ಸಲ್ಲಿಸಿದ್ದರೂ ಮುಂಬಡ್ತಿಯನ್ನು ನೀಡದಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

10. ಶ್ರೀ ಎಸ್. ಸುರೇಶ್ ಕುಮಾರ್ ಅವರು ರಾಜ್ಯದಲ್ಲಿ ಸಂಚರಿಸುತ್ತಿರುವ ಹಲವಾರು ಖಾಸಗಿ ವಾಹನಗಳ ನೋಂದಣಿ ಸಂಖ್ಯೆಯ ಬೋರ್ಡ್‌ಗಳ ಮೇಲೆ ಕಾನೂನು ಬಾಹಿರವಾಗಿ ವಿವಿಧ ಸಂಸ್ಥೆಗಳ ಹೆಸರುಗಳನ್ನು ಬರೆಸಿಕೊಂಡಿರುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

11. ಶ್ರೀ ಕೆ.ಆರ್. ರಮೇಶ ಕುಮಾರ್ ಅವರು 2014ರಲ್ಲಿ ಸಿವಿಲ್ ಪಿ.ಎಸ್.ಐ ಹುದ್ದೆಯ ನೇಮಕಾತಿಯಲ್ಲಿ ನೀಡಲಾಗಿದ್ದ ವಯೋಮಿತಿ ವಿನಾಯಿತಿಯನ್ನು 2015-16ನೇ ಸಾಲಿಗೆ ಮುಂದುವರೆಸದಿರುವುದರಿಂದ ಉಂಟಾಗಿರುವ ತಾರತಮ್ಯದ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

12. ಶ್ರೀ ಎಂ.ಪಿ.ಅಪ್ಪಚ್ಚು (ರಂಜನ್) ಅವರು ಅನಧಿಕೃತ ಸಾಗುವಳಿ ಸಕ್ರಮೀಕರಣ ಕೋರಿ ನಮೂನೆ 50ರಡಿ ಅರ್ಜಿ ಸಲ್ಲಿಸಲು ಕಾಫಿ ಬೆಳೆಗಾರರಿಗೆ ಅವಕಾಶ ನೀಡುವಂತೆ ಮತ್ತು ಈಗಾಗಲೇ ಮಂಜೂರಾತಿ ನೀಡಿರುವ ಅರ್ಜಿಗಳನ್ನು ಮಾನ್ಯ ಮಾಡಿ ಆದೇಶ ಹೊರಡಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

13. ಶ್ರೀ ಕೆ.ಎಂ.ತಿಮ್ಮರಾಯಪ್ಪ ಅವರು ಪಾವಗಡ-ದೇವಲಕೆರೆ ರಸ್ತೆಯ ಚಿನ್ನಮ್ಮಹಳ್ಳಿ ಬಾವಿಯಿಂದ ಸಿ.ಆರ್.ಪಾಳ್ಯಕ್ಕೆ ಹಾದು ಹೋಗುವ ರಸ್ತೆ ಹಾಗೂ ಕೋಣನಕುರಿಕೆಯಿಂದ ದೇವರಬೆಟ್ಟಕ್ಕೆ ಹೋಗುವ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಳ್ಳದೆ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

14. ಶ್ರೀ ಆರ್. ಜಗದೀಶ್ ಕುಮಾರ್ ಅವರು ಹೆಬ್ಬಾಳ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಬೆಂಗಳೂರು ಉತ್ತರ ತಾಲ್ಲೂಕು ಕಸಬ ಹೋಬಳಿ, ಗೆದ್ದಲಹಳ್ಳಿ ಗ್ರಾಮದ ಸರ್ವೆ ನಂ. 41 ರಲ್ಲಿ 1 ಎಕರೆ 20 ಗುಂಟೆ ಸರ್ಕಾರಿ ಜಾಗವನ್ನು ಹಂಚಿಕೆ ಮಾಡಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

15. ಶ್ರೀ ಬಿ.ಎನ್.ವಿಜಯಕುಮಾರ್ ಅವರು ಶಾಸಕರ ಕ್ಷೇತ್ರಾಭಿವೃದ್ಧಿ ನಿಧಿಗೆ ನೀಡುತ್ತಿರುವ ಅನುದಾನದಲ್ಲಿ ಸೋಲಾರ ಮತ್ತು ಸಿ.ಸಿ.ಟಿ.ವಿ ಅಳವಡಿಕೆಗೆ ಅವಕಾಶ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.,.

16. ಶ್ರೀಯುತರುಗಳಾದ ಹೆಚ್.ಕೆ.ಕುಮಾರಸ್ವಾಮಿ ಮತ್ತು ಹೆಚ್.ಡಿ.ರೇವಣ್ಣ ಅವರುಗಳು 2007ರಿಂದ ಕಾರ್ಯನಿರ್ವಹಿಸುತ್ತಿದ್ದ ಲೋಕೋಪಯೋಗಿ ವಿಶೇಷ ವಿಭಾಗದ ಕಛೇರಿಯನ್ನು ಹಾಸನದಲ್ಲಿಯೇ ಮುಂದುವರೆಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

17. ಶ್ರೀಯುತರುಗಳಾದ ಹೆಚ್.ಡಿ.ರೇವಣ್ಣ, ಕೆ.ಎಂ.ಶಿವಲಿಂಗೇಗೌಡ, ಹೆಚ್.ಎಸ್.ಪ್ರಕಾಶ್, ವೈ.ಎಸ್.ವಿ.ದತ್ತ, ಲಕ್ಷ್ಮಣ ಸಂಗಪ್ಪ ಸವದಿ, ಎಂ.ರಾಜಣ್ಣ ಹಾಗೂ ಇತರರು ಕ್ಷೀರಭಾಗ್ಯ ಯೋಜನೆಯಡಿಯಲ್ಲಿ ಮಕ್ಕಳಿಗೆ ಪ್ರತಿವಾರ ಮೂರು ದಿನ ಹಾಲನ್ನು ನೀಡುವ ಬದಲು ಐದು ದಿನ ಹಾಲನ್ನು ವಿತರಿಸುವ ಹಾಗೂ ಒಕ್ಕೂಟಗಳಿಗೆ ರೈತರ ಹಾಲಿನ ಬಿಲ್ಲುಗಳ ಪಾವತಿಗಾಗಿ ಬಡ್ಡಿರಹಿತ ಸಾಲವನ್ನು ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಟಿ.ವೆಂಕಟರಮಣಯ್ಯ, ಡಾ|| ಕೆ.ಶ್ರೀನಿವಾಸ ಮೂರ್ತಿ ಮತ್ತು ಪಿ.ಆರ್. ಸುಧಾಕರ್ ಲಾಲ್ ಅವರುಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಶೇಖರಣೆಯಾಗುವ ಘನತ್ಯಾಜ್ಯ ಕಸವನ್ನು ದೊಡ್ಡಬಳ್ಳಾಪುರ ತಾಲ್ಲೂಕಿನ ಸಕ್ಕರೆ ಗೊಲ್ಲಹಳ್ಳಿ ಗ್ರಾಮ ಪಂಚಾಯತಿಯ ಗುಂಡ್ಲುಹಳ್ಳಿ ಗ್ರಾಮದಲ್ಲಿ ಟೆರ್ರಾಫಾರ್ಮ್ ಕಸ ಸಂಸ್ಕರಣ ಘಟಕವು ವೈಜ್ಞಾನಿಕವಾಗಿ ಕಸವನ್ನು ಸಂಸ್ಕರಣೆ ಮಾಡದೆ ಪರಿಸರ ಮಾಲಿನ್ಯ ಉಂಟಾಗುತ್ತಿರುವುದರಿಂದ ಟೆರ್ರಾ ಫಾರ್ಮ್ ಮತ್ತು ಎಂ.ಎಸ್.ಜಿ.ಪಿ. ಘಟಕದ ಕಾರ್ಯ ಸ್ಥಗಿತಗೊಳಿಸುವ ಬಗ್ಗೆ ಚರ್ಚೆ.

2. ಶ್ರೀ ಕೆ.ಎಸ್.ಪುಟ್ಟಣ್ಣಯ್ಯ ಅವರು ಸರ್ಕಾರವು ಉತ್ತರ ಕರ್ನಾಟಕದ ಕಬ್ಬಿಗೆ ಎಕ್ಸ್ ಫೀಲ್ಡ್, ದಕ್ಷಿಣ ಕರ್ನಾಟಕದ ಕಬ್ಬಿಗೆ ಎಕ್ಸ್ ಗೇಟ್ ಬೆಲೆ 2500ರೂ ಗಳನ್ನು ನಿಗದಿ ಮಾಡಿದ್ದರೂ ಇತ್ತೀಚಿನ ದಿನಗಳಲ್ಲಿ ಸಕ್ಕರೆ ಬೆಲೆಯು ಕುಸಿದಿದ್ದು, ಸಕ್ಕರೆ ಉತ್ಪಾದನೆ ಬೆಲೆಗಿಂತ ಕಡಿಮೆ ಬೆಲೆಗೆ ಸಕ್ಕರೆ ಮಾರಾಟವಾಗುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಸಿ.ಎನ್.ಬಾಲಕೃಷ್ಣ, ಹೆಚ್.ಕೆ. ಕುಮಾರಸ್ವಾಮಿ ಮತ್ತು ಹೆಚ್.ಎಸ್.ಪ್ರಕಾಶ್ ಅವರುಗಳು ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಚನ್ನರಾಯಪಟ್ಟಣ ತಾಲ್ಲೂಕಿನ ಕಲ್ಲೇಸೋಮನಹಳ್ಳಿ ಏತನೀರಾವರಿ ಯೋಜನೆಯಿಂದ ಮತ್ತು ಚನ್ನರಾಯಪಟ್ಟಣ ಅಮಾನಿಕೆರೆಯಿಂದ ಕುಡಿಯುವ ನೀರಿನ ಲಭ್ಯತೆಗಾಗಿ ತಾಲ್ಲೂಕಿನ ನುಗ್ಗೇಹಳ್ಳಿ ಹೋಬಳಿ ಮತ್ತು ಹಿರೀಸಾವೆ ಹೋಬಳಿಯ ತೋಟಿ ಹಾಗೂ 25 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಚರ್ಚೆ.

ಮು.ತಿ.ನೋ.,.

4. ಶ್ರೀಯುತರುಗಳಾದ ಜಿ.ಟಿ.ದೇವೇಗೌಡ, ಹೆಚ್.ಡಿ. ಕುಮಾರಸ್ವಾಮಿ, ಕೆ.ಎಸ್. ಪುಟ್ಟಣ್ಣಯ್ಯ, ಎನ್. ಚಲುವರಾಯ ಸ್ವಾಮಿ, ಸಾ.ರಾ.ಮಹೇಶ್ ಹಾಗೂ ಇತರರು ಮೈಸೂರಿನಲ್ಲಿರುವ ಮೆ:ಫಾಲ್ಕನ್ ಟೈರ್ಸ್ ಕಾರ್ಖಾನೆಯ ಆಡಳಿತ ಮಂಡಳಿಯವರ ನಿರ್ಲಕ್ಷ್ಯದಿಂದಾಗಿ ಕಾರ್ಖಾನೆಯು ಮುಚ್ಚುವ ಸ್ಥಿತಿಗೆ ಬಂದಿದ್ದು ಸುಮಾರು 2000 ಕುಟುಂಬಗಳ ಜೀವನ ನಿರ್ವಹಣೆಗೆ ತೊಂದರೆಯಾಗುತ್ತಿರುವುದರಿಂದ ಅವರುಗಳಿಗೆ ವೇತನ ಬಿಡುಗಡೆ ಹಾಗೂ ಕಾರ್ಖಾನೆಯನ್ನು ಸುಸ್ಥಿತಿಗೆ ಕೊಂಡೊಯ್ಯುವ ಬಗ್ಗೆ ಚರ್ಚೆ.

5. ಶ್ರೀ ಎಸ್.ಆರ್. ವಿಶ್ವನಾಥ ಅವರು ಬೆಂಗಳೂರು ಉತ್ತರ ತಾಲ್ಲೂಕು ಯಲಹಂಕ ಕ್ಷೇತ್ರ, ಬೆಂಗಳೂರು ನಗರ ಜಿಲ್ಲೆ ಮತ್ತು ಇತರೆ ಭಾಗಗಳಲ್ಲಿ ಹಸಿರುಪಟ್ಟಿ ವಲಯ ಮತ್ತು ಕೃಷಿ ಭೂಮಿಗಳಲ್ಲಿ ಅಕ್ರಮವಾಗಿ ಬಡಾವಣೆಗಳನ್ನು ಭೂ ಅಭಿವೃದ್ಧಿದಾರರು ನಿರ್ಮಿಸಿ ಅದಕ್ಕೆ ನಕಲಿ ಕಂದಾಯ ದಾಖಲೆಗಳನ್ನು ಸೃಷ್ಟಿ ಮಾಡಿ ಉಪ ನೋಂದಣಾಧಿಕಾರಿಗಳು ಅಕ್ರಮವಾಗಿ ನಿವೇಶನಗಳನ್ನು ನೋಂದಣಿ ಮಾಡುತ್ತಿರುವ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)